# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **734** |
| ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 22-07-2024 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರವು ರಾಜ್ಯದಲ್ಲಿನ ಸಣ್ಣ ಮತ್ತು ಮಧ್ಯಮ ಕಾಫಿ ಬೆಳೆಗಾರರ 10 ಹೆಚ್.ಪಿ. ವರೆಗಿನ ನೀರಾವರಿ ವಿದ್ಯುತ್ ಪಂಪ್‌ಸೆಟ್‌ಗಳ ವಿದ್ಯುತ್ ಶುಲ್ಕವನ್ನು ಪಾವತಿಸಲು ವಿಧಿಸಿರುವ ಷರತ್ತುಗಳೇನು; | ಸರ್ಕಾರದ ಆದೇಶ ಸಂಖ್ಯೆ ಎನರ್ಜಿ/521/ಪಿಎಸ್ ಆರ್/2021, ಬೆಂಗಳೂರು ದಿನಾಂಕ 20.07.2022 ರಲ್ಲಿ ಸಣ್ಣ ಮತ್ತು ಮಧ್ಯಮ ಕಾಫಿ ಬೆಳೆಗಾರರ 10 ಹೆಚ್‌ಪಿ ವರೆಗಿನ ನೀರಾವರಿ ಪಂಪ್‌ಸೆಟ್ ಸ್ಥಾವರಗಳ ವಿದ್ಯುತ್ ಶುಲ್ಕವನ್ನು ಈ ಕೆಳಗಿನ ಷರತ್ತು/ ನಿಬಂಧನೆಗಳಿಗೊಳಪಟ್ಟು ನೇರ ನಗದು ವರ್ಗಾವಣೆ ಯೋಜನೆಯಡಿ ಸರ್ಕಾರದಿಂದ ಮರು ಪಾವತಿಸಲು ಆದೇಶಿಸಲಾಗಿರುತ್ತದೆ.<br><br>1. ರಾಜ್ಯದಲ್ಲಿನ ಸಣ್ಣ ಮತ್ತು ಮಧ್ಯಮ ಕಾಫಿ ಬೆಳೆಗಾರರ 10 ಹೆಚ್‌ಪಿ ವರೆಗಿನ ನೀರಾವರಿ ವಿದ್ಯುತ್ ಪಂಪ್ ಸೆಟ್‌ಗಳ ವಿದ್ಯುತ್ ಶುಲ್ಕವನ್ನು ದಿನಾಂಕ 01.07.2022 ರಿಂದ ಬಳಕೆಯಾಗುವ ವಿದ್ಯುತ್ ಬಳಕೆಗೆ ಅನ್ವಯವಾಗುವಂತೆ ಗ್ರಾಹಕರುಗಳಿಗೆ ಮರು ಪಾವತಿಸಲಾಗುವುದು.<br>2. ಈ ಪ್ರವರ್ಗದ ಫಲಾನುಭವಿ/ಗ್ರಾಹಕರುಗಳು ಸಣ್ಣ ಮತ್ತು ಮಧ್ಯಮ ಕಾಫಿ ಬೆಳೆಗಾರರಾಗಿರುವ ಬಗ್ಗೆ ಸಂಬಂಧಿಸಿದ ಇಲಾಖೆಯಿಂದ ದೃಢೀಕರಣ ಪತ್ರವನ್ನು ಒದಗಿಸತಕ್ಕದ್ದು.<br>3. ಈ ಪ್ರವರ್ಗದ ಗ್ರಾಹಕರುಗಳು ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ಸಂಖ್ಯೆ(ಖಾತೆಗೆ ಸಂಬಂಧಿಸಿದ ಇತರೆ ಮಾಹಿತಿಗಳನ್ನು ಒದಗಿಸತಕ್ಕದ್ದು) ಹಾಗೂ ಇತರೆ ಮಾಹಿತಿಗಳ ದೃಢೀಕೃತ ದಾಖಲೆಯನ್ನು ಒದಗಿಸುವುದು ಕಡ್ಡಾಯವಾಗಿರುತ್ತದೆ.<br>4. ಈ ಪ್ರವರ್ಗದ ಗ್ರಾಹಕರುಗಳ ವಿದ್ಯುತ್ ಸ್ಥಾವರಗಳಿಗೆ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ನಿಗಧಿಪಡಿಸಿರುವ ವಿದ್ಯುತ್ ದರ ಸೂಚಿಯಂತೆ ಮಾಸಿಕ ವಿದ್ಯುತ್ ಬಿಲ್ಲನ್ನು ಸಿದ್ಧಪಡಿಸಿ ನೀಡಲಾಗುವುದು.<br>5. ಈ ಸೌಲಭ್ಯಕ್ಕೆ ಅರ್ಹರಾಗುವ ಬಳಕೆದಾರರು/ಗ್ರಾಹಕರು ಮಾಸಿಕ ವಿದ್ಯುತ್ ಬಿಲ್ಲನ್ನು ಸಂಪೂರ್ಣವಾಗಿ ನಿಗದಿತ ಸಮಯದಲ್ಲಿ ಪಾವತಿಸಿದ ನಂತರ ಸದರಿ ಗ್ರಾಹಕರುಗಳಿಗೆ/ಬಳಕೆದಾರರಿಗೆ ನೇರ ನಗದು ವರ್ಗಾವಣೆ (ಡಿಬಿಟಿ) ಯೋಜನೆಯ ವ್ಯವಸ್ಥೆಯಡಿ ಸರ್ಕಾರದಿಂದ ವಿದ್ಯುತ್ ಸರಬರಾಜು ಕಂಪನಿಗಳಿಗೆ ಒದಗಿಸುವ ಸಹಾಯಧನವನ್ನು ಮಾಸಿಕ ವಿದ್ಯುತ್ ಬಳಕೆ ಶುಲ್ಕದ ಮೇಲೆ ವಿಧಿಸುವ ವಿದ್ಯುತ್ ತೆರಿಗೆಯನ್ನು ಹೊರತುಪಡಿಸಿ ನೇರವಾಗಿ ಗ್ರಾಹಕರ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುವುದು.<br>6. ಈ ಪ್ರವರ್ಗದ ಗ್ರಾಹಕರುಗಳ ಒಂದು ಸ್ಥಾವರಕ್ಕೆ ಮಾತ್ರ ಉಚಿತ ವಿದ್ಯುತ್ ಸೌಲಭ್ಯವನ್ನು ಒದಗಿಸಲಾಗುವುದು. |

| | | |
|---|---|---|
| ಆ) | ಸರ್ಕಾರಿ ಆದೇಶ ಸಂಖ್ಯೆ ಎನರ್ಜಿ/521/PSR/2021 ದಿನಾಂಕ 20-07-2022 ರಲ್ಲಿ 10 ಹೆಚ್.ಪಿ. ವರೆಗಿನ ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಶುಲ್ಕವನ್ನು ಸಣ್ಣ ಮತ್ತು ಮಧ್ಯಮ ಕಾಫಿ, ಬೆಳೆಗಾರರು ಬಳಸಿದ ವಿದ್ಯುತ್ ಬಿಲ್ಲುಗಳನ್ನು ಪಾವತಿಸಿದ ನಂತರ ರೈತರ ಖಾತೆಗೆ ಮರು ಪಾವತಿ ಮಾಡುವ ಷರತ್ತಿನ ಆದೇಶದಿಂದ ರೈತರ ವಿದ್ಯುತ್ ಬಿಲ್ಲು ಪಾವತಿಸಲು ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಷರತ್ತನ್ನು ಸಡಿಲಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ; | ರಾಜ್ಯ ಸರ್ಕಾರವು 2021-22ರ ಆಯವ್ಯಯದಲ್ಲಿ ಸರ್ಕಾರದ ಯೋಜನೆಗಳಡಿಯ ಫಲಾನುಭವಿಗಳಿಗೆ ಆರ್ಥಿಕ ನೆರವನ್ನು ಆಧಾರ್ ಆಧಾರಿತ ಪಾವತಿಯ ಡಿಬಿಟಿ ಅಡಿ ಪಾವತಿ ಮಾಡಲಾಗುತ್ತಿದ್ದು, ಈ ಸೌಲಭ್ಯ ವಿತರಣೆಯಲ್ಲಿ ಪಾರದರ್ಶಕತೆ ತರುವ ಉದ್ದೇಶದಿಂದ ಎಲ್ಲಾ ಯೋಜನೆಗಳಿಗೂ ಡಿಬಿಟಿ ಅಡಿ ಪಾವತಿ ಮಾಡಲು ಕ್ರಮವಹಿಸಲಾಗುವುದೆಂದು ಘೋಷಿಸಲಾಗಿರುತ್ತದೆ. ಅದರಂತೆ, ಆರ್ಥಿಕ ಇಲಾಖೆಯು ಹಾಗೂ ಇ-ಆಡಳಿತ ಇಲಾಖೆಯು ಎಲ್ಲಾ ಫಲಾನುಭವಿ ಆಧಾರಿತ ಯೋಜನೆಗಳನ್ನು ಡಿಬಿಟಿ ವ್ಯವಸ್ಥೆಯಡಿ ತರುವಂತೆ ಎಲ್ಲಾ ಇಲಾಖೆಗಳಿಗೆ ತಿಳಿಸಿದೆ.<br><br>ಈ ಯೋಜನೆಯು ಚಾಲ್ತಿಯಲ್ಲಿರುತ್ತದೆ. ಷರತ್ತನ್ನು ಸಡಿಲಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಇ) | ಸದರಿ ಯೋಜನೆಯ ಜಾರಿಯಲ್ಲಿದೆಯೇ; ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಸದರಿ ಯೋಜನೆಯ ಅಡಿಯಲ್ಲಿ ಬರುವ ಅರ್ಹ ಫಲಾನುಭವಿಗಳ ಸಂಖ್ಯೆ ಎಷ್ಟು? | ಕೊಡುಗು ಜಿಲ್ಲೆಗೆ ಸಂಬಂಧಿಸಿದಂತೆ ಈ ಯೋಜನೆಯಡಿಯಲ್ಲಿ ಒಟ್ಟು 3,923 ಗ್ರಾಹಕರಿರುತ್ತಾರೆ. |

ಸಂಖ್ಯೆ: ಎನರ್ಜಿ 188 ಇಬಿಎಸ್ 2024

(ಕೆ.ಜೆ.ಜಾರ್ಜ್)
ಇಂಧನ ಸಚಿವರು